DECEMBER 01, 2024

AKASHAVANI - DHARWAD

PRADESH SAAMACHARA (KANNADA) 7.05 A.M

ಮುಖ್ಯಾಂಶಗಳು

- ಬಾಣಂತಿಯರ ಸಾವಿನ ಪ್ರಕರಣ ಕುರಿತ ತನಿಖೆಗೆ ತಜ್ಞರ ಸಮಿತಿ ರಚಿಸಲು ನಿರ್ಧಾರ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ದರಖಾಸ್ತು ಪೋಡಿ ದುರಸ್ತಿ ಸರಳೀಕೃತ ಕಾರ್ಯ ಯೋಜನೆಗೆ ಚಾಲನೆ; ಸರ್ವೆ ಕಾರ್ಯಕ್ಕೆ ರೋವರ್ ಯಂತ್ರ ಸಹಕಾರಿ – ಸಚಿವ ಕೃಷ್ಣ ಭೈರೇಗೌಡ.
- ಅನ್ನದಾತರ ಹಿತರಕ್ಷಣೆ ಸರ್ಕಾರದ ಆದ್ಯತೆ – ಸಚಿವ ಎನ್. ಚಲುವರಾಯಸ್ವಾಮಿ
- ‘ನನ್ನ ಆರೋಗ್ಯ, ನನ್ನ ಹಕ್ಕು. ಸನ್ಮಾರ್ಗದಲ್ಲಿ ನಡೆಯೋಣ” ಘೋಷ ವಾಕ್ಯದೊಂದಿಗೆ ಇಂದು ವಿಶ್ವ ಏಡ್ಸ್ ಜಾಗ್ರತಿ ದಿನ ಆಚರಣೆ.

ಈಗ ವಾರ್ತೆಗಳ ವಿವರ

ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಬಾಣಂತಿಯರ ಸಾವಿನ ಪ್ರಕರಣಕ್ಕೆ ಸಂಬಂಧಪಟ್ಟಂತೆ ಕರ್ತವ್ಯ ಲೋಪಕ್ಕಾಗಿ ಡ್ರಗ್ ಕಂಟ್ರೋಲರ್ ಉಮೇಶ್ ಅವರನ್ನು ಅಮಾನತಗೊಳಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಇತ್ತೀಚೆಗೆ ಸಂಭವಿಸಿದ ಬಾಣಂತಿಯರ ಸಾವಿನ ಕುರಿತಾಗಿ ನಡೆದ ಉನ್ನತ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಿಂಗರ್ ಲ್ಯಾಕ್ಟೇಟ್ ದ್ರಾವಣ ಪೂರೈಸಿರುವ ಕಂಪೆನಿಯನ್ನು ಕಪ್ಪು ಪಟ್ಟಿಗೆ ಸೇರಿಸಿ, ಅದರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಆದೇಶಿಸಲಾಗಿದೆ ಎಂದರು. ಸಾವಿನ ಪ್ರಕರಣಕ್ಕೆ ಸಂಬಂಧಪಟ್ಟಂತೆ, ಈಗಾಗಲೇ ಸರ್ಕಾರದಿಂದ 2 ಲಕ್ಷ ರೂಪಾಯಿ ಪರಿಹಾರ ಘೋಷಿಸಲಾಗಿದೆ. ಡ್ರಗ್ ಪೂರೈಸಿದ ಕಂಪೆನಿಯಿಂದಲೂ ಪರಿಹಾರವನ್ನು ಮೃತರ ಕುಟುಂಬಕ್ಕೆ ನೀಡಲು ಸೂಚಿಸಲಾಗಿದೆ. ರಾಜ್ಯದ ವಿವಿಧ ಆಸ್ಪತ್ರೆಗಳಲ್ಲಿ ಸಂಭವಿಸಿರುವ ಈ ರೀತಿಯ ಸಾವಿನ ಪ್ರಕರಣಗಳ ಬಗ್ಗೆ ತನಿಖೆ ನಡೆಸಲು ಅಭಿವೃದ್ಧಿ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ತಜ್ಞರ ಸಮಿತಿ ರಚಿಸಲು ನಿರ್ಧಾರಿಸಲಾಗಿದೆ ಎಂದು ತಿಳಿಸಿದರು.

*******

ಬಳ್ಳಾರಿ ಜಿಲ್ಲೆಯಲ್ಲಿನ ಬಾಣಂತಿಯರ ಸಾವಿನ ಕುರಿತು ವಿಚಾರಣೆ ನಡೆಯುತ್ತಿದೆ. ಮುಂಜಾಗ್ರತಾ ಕ್ರಮವಾಗಿ ರಾಜ್ಯ ಸರ್ಕಾರಿ ಆಸ್ಪತ್ರೆಗಳಲ್ಲಿ ಐವಿ ರಿಂಗರ್ ಲ್ಯಾಕ್ಟೇಟ್ ಬಳಕೆಯನ್ನು ತಡೆಹಿಡಿಯಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಬಳ್ಳಾರಿ ಜಿಲ್ಲೆಯಲ್ಲಿ ಬಾಣಂತಿಯರ ಸಾವುಗಳ ಕುರಿತು ಬೆಂಗಳೂರಿನ ವಿಕಾಸಸೌಧದಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಳ್ಳಾರಿ ಆಸ್ಪತ್ರೆಯಲ್ಲಿ ಬಳಕೆ ಮಾಡಲಾದ ದ್ರಾವಣವನ್ನು ಪರೀಕ್ಷೆಗೆ ಒಳಪಡಿಸುವ ಮೂಲಕ ದ್ರಾವಣದ ಗುಣಮಟ್ಟದ ಬಗ್ಗೆ ಖಚಿತ ವರದಿ ಪಡೆದುಕೊಳ್ಳಲಾಗುವುದು ಎಂದು ತಿಳಿಸಿದರು.

*******

ರಾಜ್ಯದ ಆಸ್ಪತ್ರೆಗಳಲ್ಲಿ ಬಾಣಂತಿಯರ ಅಸಹಜ ಸಾವು ಆತಂಕಕ್ಕೀಡು ಮಾಡಿದ್ದು, ಸರ್ಕಾರ ಈ ನಿಟ್ಟಿನಲ್ಲಿ ಗಂಭೀರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಕೇಂದ್ರ ಸಚಿವರಾದ ಶೋಭಾ ಕರಂದ್ಲಾಜೆ ಆಗ್ರಹಿಸಿದ್ದಾರೆ. ದೆಹಲಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ

ಮಾತನಾಡಿದ ಅವರು, ಬಳ್ಳಾರಿ ಜಿಲ್ಲೆಯಲ್ಲಿನ ಬಾಣಂತಿಯರ ಸಾವು ಉದಾಹರಣೆಯ ್ಟಿ ಆಗಿದೆ. ಸಿಜೇರಿಯನ್ ಚಿಕಿತ್ಸೆಗೆ ಒಳಗಾದ ಹೆಣ್ಣು ಮಕ್ಕಳಿಗೆ ನೀಡುವ, ಗ್ಲೂಕೋಸ್‌ನಿಂದ ಸಾವು ಸಂಭವಿಸಿದೆ ಎಂದು ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ವೈದ್ಯರ ತಂಡ ವರದಿ ನೀಡಿದೆ. ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿರುವ ಕೇಂದ್ರ ಸರ್ಕಾರದ ಜನೌ ಧಿ ಕೇಂದ್ರಗಳನ್ನು ಮುಚ್ಚುವ ಪ್ರಯತ್ನಗಳಾಗುತ್ತಿದ್ದು, ಅನ್ಯ ಸಂಸ್ಥೆಗಳಿಗೆ ಟೆಂಡರ್ ನೀಡುವ ಹುನ್ನಾರ ನಡೆಸಲಾಗಿದೆ ಎಂದು ತಿಳಿಸಿದರು.

*******

ಬಾಣಂತಿಯರ ಸರಣಿ ಸಾವಿನ ಹಿನ್ನೆಲೆ, ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಇಂದು ಬಳ್ಳಾರಿಯ ಬಿಮ್ಸ್‌ಗೆ ಭೇಟಿ ನೀಡಿ, ಪರಿಶೀಲನೆ ನಡೆಸಿ ರೋಗಿಗಳು ಮತ್ತು ಸಂಬಂಧಿಕರ ಅಹವಾಲು ಸ್ವೀಕರಿಸಲಿದ್ದಾರೆ.

*******

ದರಖಾಸ್ತು ಪೋಡಿ ದುರಸ್ತಿ ಸರಳೀಕೃತ ಕಾರ್ಯ ಯೋಜನೆಗೆ ಚಾಲನೆ ನೀಡಲಾಗಿದ್ದು ರೋವರ್ ಯಂತ್ರದ ಮೂಲಕ ಸರ್ವೆ ಕಾರ್ಯ ಚುರುಕಾಗಲಿದೆ ಎಂದು ಕಂದಾಯ ಖಾತೆ ಸಚಿವ ಕೃ ್ಣ ಭೈರೇಗೌಡ ಹೇಳಿದ್ದಾರೆ. ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕಿನ ಬಾಗಿವಾಳು ಗ್ರಾಮದಲ್ಲಿ ದರಖಾಸ್ತು ಪೋಡಿ ದುರಸ್ತಿ ಸರಳೀಕೃತ ಮಹತ್ವದ ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯದಲ್ಲಿ ಬಾಕಿಯಿರುವ ಲಕ್ಷಾಂತರ ಅರ್ಜಿಗಳ ಶೀಘ್ರ ವಿಲೇವಾರಿಗಾಗಿ ಹೊಸ ಯೋಜನೆ ಜಾರಿ ಮಾಡಲಾಗುತ್ತಿದೆ. ಒಂದು ಕೋಟಿಗೂ ಅಧಿಕ ರೈತರಿಗೆ ಹೊಸ ಯೋಜನೆ ಉಪಯೋಗವಾಗುವ ಸಾಧ್ಯತೆ ಇದ್ದು, ಸರ್ಕಾರಿ ಜಮೀನು ಮಂಜೂರಾಗಿ ಐವತ್ತು ವ ್ ಆದರೂ ಪೋಡಿ, ದುರಸ್ತಿ ಆಗದೆ ಅನಾನುಕೂಲವಾಗಿದೆ ಎಂದರು.

*******

ಜಮೀನು ದುರಸ್ತಿ ಹಾಗೂ ಪೋಡಿ ಸಂಬಂಧಿತ ವಿ ಯಗಳಿಗಾಗಿ ರೈತರು ಕಚೇರಿಗೆ ಅಲೆಯುವುದನ್ನು ತಪ್ಪಿಸಲು ಮಹತ್ವದ ಬದಲಾವಣೆಗಳನ್ನು ತರುವ ಮೂಲಕ ಇಡೀ ಪ್ರಕ್ರಿಯೆಯನ್ನು ಸರಳೀಕರಣಗೊಳಿಸಲಾಗಿದೆ ಎಂದು ಕೃಷಿ ಖಾತೆ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದ್ದಾರೆ. ಕನಿ ್ಠ ಮೂರು ದಾಖಲಾತಿಗಳು ಲಭ್ಯವಿದ್ದಲ್ಲಿ ತಹಸೀಲ್ದಾರರೇ ನೈಜತೆ ಪರಿಶೀಲಿಸಿ ಪೋಡಿ ಕ್ರಮಕ್ಕೆ ಆದೇಶಿಸಲು, ರಾಜ್ಯ ಸರ್ಕಾರ ಅನುವು ಮಾಡಿಕೊಟ್ಟಿದೆ. ಅನ್ನದಾತರ ಹಿತರಕ್ಷಣೆ ಸರ್ಕಾರದ ಮೊದಲ ಆದ್ಯತೆ ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಹೇಳಿದ್ದಾರೆ.

*******

ಮಳೆಗಾಲ ಮುಗಿದಿರುವ ಹಿನ್ನೆಲೆ, ಲೋಕೋಪಯೋಗಿ ಮತ್ತು ಪಂಚಾಯತ್ ರಾಜ್ ಇಲಾಖೆ ವ್ಯಾಪ್ತಿಯ ರಸ್ತೆ ಕಾಮಗಾರಿಯನ್ನು ಕೂಡಲೇ ಕೈಗೊಳ್ಳುವಂತೆ ಸಂಬಂಧಪಟ್ಟ ಎಂಜಿನಿಯರುಗಳಿಗೆ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಎಸ್.ಭೋಸರಾಜು ನಿರ್ದೇಶನ ನೀಡಿದ್ದಾರೆ. ಮಡಿಕೇರಿಯಲ್ಲಿ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಕೊಡಗು ಜಿಲ್ಲೆಯಲ್ಲಿ ಸಿವಿಲ್ ಕಾಮಗಾರಿಗಳನ್ನು ಕೈಗೊಳ್ಳಲು ನವೆಂಬರನಿಂದ ಮಾರ್ಚ್ ತಿಂಗಳಿನವರೆಗೆ ಸೂಕ್ತ ಕಾಲವಾಗಿದ್ದು, ಈ ಹಿನ್ನೆಲೆ ರಸ್ತೆ ಕಾಮಗಾರಿಗಳನ್ನು ಕೈಗೊಂಡು ಸಾರ್ವಜನಿಕರಿಗೆ ಅನುಕೂಲ ಮಾಡಬೇಕು ಎಂದು ಹೇಳಿದರು.

*******

ಶಿವಮೊಗ್ಗ ಜಿಲ್ಲೆಯ ಗ್ರಾಮೀಣ ಪ್ರದೇಶಗಳ ಸರ್ಕಾರಿ ಭೂಮಿ ಅಥವಾ ಅರಣ್ಯ ಪ್ರದೇಶಗಳಲ್ಲಿ ಹಲವು ದಶಕಗಳಿಂದ ಸಾಗುವಳಿ ಮಾಡಿಕೊಂಡು ಜೀವನ ಸಾಗಿಸುತ್ತಿರುವ ರೈತರನ್ನರು ಒಕ್ಕಲೆಬ್ಬಿಸುವ ಹಾಗೂ ನೋಟಿಸ್ ನೀಡಿ ಆತಂಕಕ್ಕಿಡು ಮಾಡದಂತೆ, ಈಗಾಗಲೇ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಚಿವ ಮಧು ಎಸ್.ಬಂಗಾರಪ್ಪ ತಿಳಿಸಿದ್ದಾರೆ. ಶಿವಮೊಗ್ಗದಲ್ಲಿ ಆಯೋಜಿಸಲಾಗಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅರ್ಹ ಫಲಾನುಭವಿಗಳಿಗೆ ಸರ್ಕಾರದ ವತಿಯಿಂದ ನೀಡಲಾಗುವ ಸಹಾಯಧನವನ್ನು ಬ್ಯಾಂಕುಗಳ ವ್ಯವಸ್ಥಾಪಕರು, ಗ್ರಾಹಕರ ಗಮನಕ್ಕೆ ಬಾರದೆ ಜಮಾ ಮಾಡಿಕೊಳ್ಳುವ ಪ್ರಕರಣಗಳು ಕಂಡುಬಂದಲ್ಲಿ ಅಂತಹ ಬ್ಯಾಂಕುಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

'ನನ್ನ ಆರೋಗ್ಯ, ನನ್ನ ಹಕ್ಕು. ಸನ್ಮಾರ್ಗದಲ್ಲಿ ನಡೆಯೋಣ" ಘೋಷ ವಾಕ್ಯದೊಂದಿಗೆ ಇಂದು ವಿಶ್ವ ಏಡ್ಸ್ ಜಾಗ್ರತಿ ದಿನ ಆಚರಿಸಲಾಗುತ್ತದೆ. ವಿಶ್ವ ಏಡ್ಸ್ ಜಾಗ್ರತಿ ದಿನದ ಪ್ರಮುಖ ಉದ್ದೇಶವೆಂದರೆ ಈ ಕುರಿತು ಸಾರ್ವಜನಿರಕಲ್ಲಿ ಜಾಗೃತಿ ಮೂಡಿಸುವುದು, ಲೈಂಗಿಕ ಶಿಕ್ಷಣದ ಬಗ್ಗೆ ಅರಿವು ಮೂಡಿಸುವುದು, ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣದ ಬಗ್ಗೆ ಶಿಕ್ಷಣ ನೀಡುವುದು. ಏಡ್ಸ್ ಎಂದ ತಕ್ಷಣ ಭಯಭೀತರಾಗಬಾರದು. ಸೋಂಕಿತರನ್ನು ಕೀಳಾಗಿ ಕಾಣದೆ, ಅವರಲ್ಲಿ ಮಾನಸಿಕ ಸ್ಥೆರ್ಯ ತುಂಬಿ ಸಮಾಜದಲ್ಲಿ ಎಲ್ಲರಂತೆ ಬದುಕಲು ಅವಕಾಶ ನೀಡಬೇಕು.

*******

ಇತಿಹಾಸ ತಿಳಿಯಲಾರದವನು ಇತಿಹಾಸ ಬರೆಯಲಾರ ಎನ್ನುವಂತೆ ಯುವ ಸಮೂಹ, ಹೊಸ ಇತಿಹಾಸ ಸೃಷ್ಟಿಸುವತ್ತ ತಮ್ಮ ಚಿತ್ತ ಹರಿಸಿ, ಬದುಕು ಹಸನಾಗಿಸಿಕೊಳ್ಳಬೇಕು ಎಂದು ಅಬಕಾರಿ ಖಾತೆ ಸಚಿವ ಆರ್. ಬಿ.ತಿಮ್ಮಾಪೂರ ಹೇಳಿದ್ದಾರೆ. ಬಾಗಲಕೋಟೆಯಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ಆಚಾರ–ವಿಚಾರ, ಸಂಸ್ಕೃತಿ, ಸಂಸ್ಕಾರಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಯುವ ಪೀಳಿಗೆ ತಮ್ಮ ಭವಿಷ್ಯ ಉತ್ತಮಗೊಳಿಸುವಲ್ಲಿ ಮುಂದಾಗಬೇಕು ಎಂದರು.

*******

ಯುವಶಕ್ತಿಯೇ ಭಾರತ ದೇಶದ ನಿಜವಾದ ಆಸ್ತಿಯಾಗಿದ್ದು, ಶಾಲಾ–ಕಾಲೇಜು ಹಂತದಲ್ಲೇ ಯುವ ಸಮೂಹಕ್ಕೆ ಕೌಶಲ್ಯಭರಿತ ಶಿಕ್ಷಣ ನೀಡುವ ಕೆಲಸವಾಗಬೇಕು. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಯುವ ಸಮೂಹದ ಕಲ್ಯಾಣಕ್ಕಾಗಿ ಸಾಕ ಷ್ಟು ಯೋಜನೆಗಳನ್ನು ಜಾರಿಗೆ ತಂದಿದೆ ಎಂದು ಸಂಸದ ಡಾಕ್ಟರ್ ಕೆ.ಸುಧಾಕರ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ನಡೆದ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ದೇಶದ ಅಭಿವೃದ್ಧಿಯಲ್ಲಿ ಯುವಜನರ ಪಾತ್ರ ಮಹತ್ವದ್ದಾಗಿದೆ. ಸರ್ಕಾರದ ಯೋಜನೆಗಳನ್ನು ಯುವ ಸಮೂಹ ಸದುಪಯೋಗ ಪಡೆದುಕೊಂಡು ಕ್ರೀಡೆ, ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ ತಮ್ಮ ಪ್ರತಿಭೆ ಪ್ರದರ್ಶಿಸಬೇಕು ಎಂದರು.

*******

ಸಾರ್ವಜನಿಕರು, ಸರ್ಕಾರಿ ಕಚೇರಿಗಳಿಗೆ ತಮ್ಮ ಕೆಲಸಗಳಿಗೆ ಬಂದಾಗ ಅಧಿಕಾರಿಗಳು ಸೂಕ್ತ ರೀತಿಯಲ್ಲಿ ಸ್ಪಂದಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಉಡುಪಿಯ, ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರಸ್ತುತ ಸಾಲಿನಲ್ಲಿ ವಾಡಿಕೆಗಿಂತ ಶೇಕಡ 17 ರ ಷ್ಟು ಹೆಚ್ಚು ಮಳೆಯಾಗಿದೆ. ಹೆಚ್ಚಿನ ಮಳೆಯಿಂದಾಗಿ ಬೆಳೆಹಾನಿ, ಮೂಲಭೂತ ಸೌಕರ್ಯಗಳಾದ ರಸ್ತೆ, ಸರ್ಕಾರಿ ಕಟ್ಟಡಗಳು, ಸೇತುವೆ ಸೇರಿದಂತೆ ಮತ್ತಿತರ ಆಸ್ತಿ ಪಾಸ್ತಿಗಳಿಗೆ ಹಾನಿ ಉಂಟಾಗಿದೆ. ಈ ಸಂಬಂಧ ಈಗಾಗಲೇ ಬೆಳೆಹಾನಿ ಸೇರಿದಂತೆ ಮತ್ತಿತರ ಹಾನಿಗಳಿಗೆ ಪರಿಹಾರವನ್ನು ನೀಡಲಾಗಿದೆ ಎಂದರು. ನಗರಾಭಿವೃದ್ಧಿ ಅನುದಾನದಲ್ಲಿ 15 ದಿನಗಳ ಒಳಗಾಗಿ ಕೆರೆಗಳ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಬೇಕು. ಗ್ರಾಮೀಣ ಭಾಗಗಳಲ್ಲಿ ತಾಂತ್ರಿಕ ಕಾರಣದಿಂದಾಗಿ ಘನತಾಜ್ಯ ವಿಲೇವಾರಿ ವೈಜ್ಞಾನಿಕ ರೀತಿಯಲ್ಲಿ ಆಗುತ್ತಿಲ್ಲ. ಇದನ್ನೂ ಕೂಡಲೇ ಬಗೆಹರಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

*******

ಚಿಕ್ಕಮಗಳೂರು ಜಿಲ್ಲೆಯ ಹಲವೆಡೆ ಕಾಡಾನೆಗಳ ದಾಳಿ ಮುಂದುವರೆದಿದ್ದು ರೈತರ ಜಮೀನಿಗೆ ನುಗ್ಗಿ ಹಾನಿ ಮಾಡುತ್ತಿವೆ. ನಿನ್ನೆ ಸಂಜೆ ಜಿಲ್ಲೆಯ ಎನ್.ಆರ್.ಪುರ ತಾಲೂಕಿನಲ್ಲಿ ಕಾಡಾನೆ ದಾಳಿಯಿಂದ ರೈತರೊಬ್ಬರು ಮೃತಪಟ್ಟಿದ್ದಾರೆ. ಮೂಕ್ತಿಹಳ್ಳಿ ಗ್ರಾಮದಲ್ಲಿ ಕಾಫಿ ತೋಟ ಹಾಗೂ ಅರಣ್ಯ ಭಾಗದಲ್ಲಿ ಸುಮಾರು 13 ಕಾಡಾನೆಗಳು ಸಂಚರಿಸುತ್ತಿದ್ದು, ಸ್ಥಳಿಯ ರೈತರೊಬ್ಬರ ಕಾಫಿ ತೋಟಕ್ಕೆ ನುಗ್ಗಿ 250 ಕ್ಕೂ ಹೆಚ್ಚು ಕಾಫಿ ಗಿಡ, ಅಡಿಕೆ ಗಿಡಗಳನ್ನು ಹಾಗೂ ಕೊಯ್ಲು ಮಾಡಿ ಇಟ್ಟಿದ ಸುಮಾರು 16 ಕಾಫಿ ಮೂಟೆಗಳನ್ನು ತುಳಿದು ನಾಶಪಡಿಸಿವೆ.

*******

ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತ ಹಿನ್ನೆಲೆಯಲ್ಲಿ, ಕರಾವಳಿ ಕರ್ನಾಟಕದ ದಕ್ಷಿಣ ಕನ್ನಡ, ಉಡುಪಿ ಜಿಲ್ಲೆ ಮತ್ತು ಮಲೆನಾಡು ಜಿಲ್ಲೆಗಳಲ್ಲಿ ಇಂದಿನಿಂದ 3 ದಿನಗಳ ಕಾಲ ಗುಡುಗು, ಮಿಂಚು ಸಹಿತ ಮಳೆಯಾಗಲಿದೆ. ಉತ್ತರ ಒಳನಾಡು ಜಿಲ್ಲೆಗಳಲ್ಲಿ ಅಲ್ಲಲ್ಲಿ ತುಂತುರು ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

*******

ಈಗ ಸಂಕ್ಷಿಪ್ತ ಸುದ್ದಿಗಳು

ದಕ್ಷಿಣ ಕನ್ನಡ ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರಗಳಲ್ಲೊಂದಾದ ಕುಕ್ಕೆ ಶ್ರೀ ಸುಬ್ರಹ್ಮಣ್ಯ ದೇವರ ವಾರ್ಷಿಕ ಚಂಪಾ ಷ್ಠಿ ಜಾತ್ರಾ ಮಹೋತ್ಸವದ ಅಂಗವಾಗಿ ನಿನ್ನೆ ರಾತ್ರಿ ವೈಭವದ ಲಕ್ಷ ದೀಪೋತ್ಸವ ನೆರವೇರಿತು.

*******

ಕಾರವಾರ ಜಿಲ್ಲೆಯ ಎಲ್ಲಾ ಸರಕಾರಿ ಕಚೇರಿ ಕಟ್ಟಡಗಳ ಮೇಲ್ಚಾವಣಿ ಮೇಲೆ ಸೋಲಾರ್ ಘಟಕಗಳನ್ನು ಸ್ಥಾಪಿಸುವ ಮೂಲಕ ಜಿಲ್ಲೆಯನ್ನು ರಾಜ್ಯದಲ್ಲಿಯೇ ಮಾದರಿ ಸೋಲಾರ್ ಜಿಲ್ಲೆಯಾಗಿ ಮಾಡುವ ನಿಟ್ಟಿನಲ್ಲಿ ಎಲ್ಲಾ ಇಲಾಖೆಯ ಅಧಿಕಾರಿಗಳು ತಕ್ಷಣದಿಂದಲೇ ಕಾರ್ಯೋನ್ಮುಖರಾಗಬೇಕು ಎಂದು ಉತ್ತರಕನ್ನಡ ಅಪರ ಜಿಲ್ಲಾಧಿಕಾರಿ ಸಾಜೀದ್ ಅಹಮದ್ ಮುಲ್ಲಾ ಹೇಳಿದ್ದಾರೆ.

*******

ಕಣ್ಣಿನ ಆರೋಗ್ಯ ಮತ್ತು ಸುರಕ್ಷತೆ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ಕಾಲಕಾಲಕ್ಕೆ ನೇತ್ರ ತಜ್ಞರಿಂದ ತಪಾಸಣೆಗೆ ಒಳಪಡಿಸಬೇಕು ಎಂದು ಚಿಕ್ಕಬಳ್ಳಾಪುರ ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಡಾಕ್ಟರ್ ಎನ್.ಭಾಸ್ಕರ್ ಸಲಹೆ ನೀಡಿದ್ದಾರೆ.

*******

ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರನ್ನು ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಫಲಾನುಭವಿಗಳನ್ನಾಗಿ ನೋಂದಾಯಿಸಲು ಕಾರ್ಮಿಕ ನಿರೀಕ್ಷಕರುಗಳನ್ನು ನೋಂದಣಿ ಅಧಿಕಾರಿಯಾಗಿ ನೇಮಕ ಮಾಡಲಾಗಿರುತ್ತದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಶಿವಮೊಗ್ಗದಲ್ಲಿ ತಿಳಿಸಿದ್ದಾರೆ.

*******